ಅಸಲು ದಾವಾ ಸಂಖ್ಯೆ -184/2015
ಡಿ.ಡಬ್ಲ್ಯೂ - 01
ದಿನಾಂಕಃ 19-02-2025
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಪ್ರತಿವಾದಿ ಪರ ಶ್ರೀ. ವಿ ಬಿ ಟಿ ವಕೀಲರಿಂದಃ**

ಈ ದಾವೆಯಲ್ಲಿ ನಾನು 1 ನೇ ಪ್ರತಿವಾದಿಯಾಗಿದ್ದು, ಇಂದು ನಾನು ನನ್ನ ಮೌಖಿಕ ಸಾಕ್ಷ್ಯದ ಬದಲು ಈ ಮುಖ್ಯ ವಿಚಾರಣೆಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದೇನೆ. ಇದರಲ್ಲಿ ಬರೆದ ಎಲ್ಲ ವಿಷಯ ನಿಜ ಮತ್ತು ಸರಿ ಇದ್ದು ನನಗೆ ಗೊತ್ತಿದೆ.

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

ಆಸ್ತಿ ನಂ. 546/2 ರ ಆಸ್ತಿ ಉತಾರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 1 ಎಂದು ಗುರುತಿಸಲಾಯಿತು.

ಕಟ್ಟಡದ ನಕ್ಷೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 2 ಎಂದು ಗುರುತಿಸಲಾಯಿತು.

ದಿಃ 04-06-2015 ರಂದು ಆಸ್ತಿ ನಂ. 546/2 ರ ಮೂಲ ಖರಿದಿ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 3 ಎಂದು ಗುರುತಿಸಲಾಯಿತು.

ಸವಣೂರ ಗ್ರಾಮದ ಸರ್ವೆ ನಂ. 543 ಮತ್ತು 544 ರ 2015-16 ನೇ ಸಾಲಿನ ಉತಾರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ-4 ಮತ್ತು 5 ಎಂದು ಗುರುತಿಸಲಾಯಿತು.

ಸವಣೂರ ಗ್ರಾಮದ ಸರ್ವೆ ನಂ. 543,544 ಮತ್ತು 545 ರ 2023-24 ನೇ ಸಾಲಿನ ಉತಾರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ-6 ರಿಂದ 8 ಎಂದು ಗುರುತಿಸಲಾಯಿತು.

ಅಸಲು ದಾವಾ ಸಂಖ್ಯೆ 184/2015 ರಲ್ಲಿ ಕೋರ್ಟ ಕಮೀಷನರ ರವರು ಸಲ್ಲಿಸಿದ ವರದಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 9 ಎಂದು ಗುರುತಿಸಲಾಯಿತು.

ದಿಃ 30-03-2023 ರಂದು ಡಬ್ಲೂ ಪಿ ನಂ. 63141/2011 ರಲ್ಲಿ ಗೌರವಾನ್ವಿತ ಮಾನ್ಯ ಉಚ್ಚನ್ಯಾಯಾಲಯ ಧಾರವಾಡ ರವರು ಹೊರಡಿಸಿದ ಆದೇಶ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 10 ಎಂದು ಗುರುತಿಸಲಾಯಿತು.

ಒಂದು ನಕ್ಷೆಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ- 11 ಎಂದು ಗುರುತಿಸಲಾಯಿತು.

**<u>ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗೆ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.</u>**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು